ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜ ನಿ : ಸುಮಪ : 2020–21 ದಿನಾಂಕ : 23–08–2020

## ಪತ್ರಿಕಾ ಪ್ರಕಟಣೆ

## ರಾಷ್ಟ್ರೀಯ ಶಿಕ್ಷಣ ನೀತಿ–2020 ಕಾರ್ಯಾಗಾರ

ಬೆಂಗಳೂರು, ಆಗಸ್ಟ್ 23 (ಕರ್ನಾಟಕ ವಾರ್ತೆ)

ಬೆಂಗಳೂರು ವಿಶ್ವವಿದ್ಯಾಲಯ ವತಿಯಿಂದ "ರಾಷ್ಟ್ರೀಯ ಶಿಕ್ಷಣ ನೀತಿ 2020" ಎಂಬ ವಿಚಾರದ ಐದು ದಿನಗಳ ಕಾರ್ಯಾಗಾರವನ್ನು ಆಗಸ್ಟ್ 24 ರಿಂದ 28 ರ ವರೆಗೆ ಹಮ್ಮಿಕೊಳ್ಳಲಾಗಿದ್ದು, ಈ ಕಾರ್ಯಕ್ರಮದ ಉದ್ಘಾಟನೆಯನ್ನು ಗೌರವಾನ್ವಿತ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರಾದ ಶ್ರೀ ಸಿ.ಎನ್. ಅಶ್ವಥ್ ನಾರಾಯಣ್ ಅವರು ನೆರವೇರಿಸಲಿದ್ದು, ಮುಖ್ಯ ಭಾಷಣಗಾರರಾಗಿ, ದೆಹಲಿಯ ವಿಶ್ವವಿದ್ಯಾಲಯ ಧನಸಹಾಯ ಆಯೋಗದ ಅಧ್ಯಕ್ಷರಾದ ಪ್ರೊ.ಡಿ.ಪಿ.ಸಿಂಗ್ ಹಾಗೂ ಗೌರವ ಅತಿಥಿಗಳಾಗಿ ವಿಶ್ವವಿದ್ಯಾಲಯ ಧನಸಹಾಯ ಆಯೋಗದ ಉಪಾಧ್ಯಕ್ಷರಾದ ಡಾ. ಭೂಷಣ್ ಪಟವರ್ಧನ್ ಆಗಮಿಸುತ್ತಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬೆಂಗಳೂರು ವಿಶ್ವವಿದ್ಯಾಲಯದ ಮಾನ್ಯ ಕುಲಪತಿಗಳಾದ ಪ್ರೊ. ಕೆ. ಆರ್. ವೇಣುಗೋಪಾಲ್ ಅವರು ವಹಿಸಿದ್ದಾರೆ.

ಬೆಂಗಳೂರು ವಿಶ್ವವಿದ್ಯಾಲಯ ಪ್ರಪ್ರಥಮ ಬಾರಿಗೆ ವಿಶ್ವವಿದ್ಯಾಲಯ ಧನಸಹಾಯ ಆಯೋಗದ ನಿರ್ದೇಶನದಂತೆ, ಐದು ದಿನಗಳ ಕಾರ್ಯಗಾರದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯ ಸಂಪೂರ್ಣ ಮಾಹಿತಿಯನ್ನು ಹಾಗೂ ಅದರ ಅನುಷ್ಠಾನದ ಬಗ್ಗೆ ಸವಿವರವಾಗಿ ದೇಶದ ಎಲ್ಲಾ ವಿಶ್ವವಿದ್ಯಾಲಯಗಳ ಪ್ರಾಧ್ಯಾಪಕರುಗಳಿಗೆ, ಸಂಶೋಧನಾ, ಪದವಿ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ, ಅಧಿಕಾರಿಗಳಿಗೆ ಪೋಷಕರುಗಳಿಗೆ ಹಾಗೂ ಎಲ್ಲಾ ಸಾರ್ವಜನಿಕರಿಗೆ ಅರಿವು ಮೂಡಿಸಲು ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಗೌರವಾನ್ವಿತ ಉಪಮುಖ್ಯಮಂತ್ರಿಗಳು ಹಾಗೂ ಸಮಾಜ ಕಲ್ಯಾಣ ಸಚಿವರಾದ ಶ್ರೀ ಗೋವಿಂದ ಎಂ ಕಾರಜೋಳ ಭಾಗವಹಿಸಲಿದ್ದು, ಕಾರ್ಯಕ್ರಮದ ಎರಡನೇ ದಿನದಂದು ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರಾದ ಶ್ರೀ ಎಸ್. ಸುರೇಶ್ ಕುಮಾರ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದ ಎಲ್ಲಾ ಐದು ದಿನಗಳಲ್ಲಿ ಮುಖ್ಯ ಭಾಷಣಕಾರರು ಹಾಗೂ ಸಂಪನ್ಮೂಲ ವ್ಯಕ್ತಿಗಳಾಗಿ ಅಖಿಲ ಭಾರತೀಯ ತಾಂತ್ರಿಕ ಶಿಕ್ಷಣ ಕೌನ್ಸಿಲ್ ಅಧ್ಯಕ್ಷರಾದ ಪ್ರೊ.ಅನಿಲ್ ಸಹಸ್ರ ಬುಂಡೆ, ಭಾರತೀಯ ವಿಜ್ಞಾನ ಸಂಸ್ಥೆಯ ಮಾಜಿ ನಿರ್ದೇಶಕರಾದ ಪದ್ಮಭೂಷಣ ಪ್ರೊ. ಬಲರಾಮ್, ನ್ಯಾಕ್ ನಿರ್ದೇಶಕರಾದ ಪ್ರೊ. ಎಸ್.ಸಿ. ಶರ್ಮ, ಡಿ.ಆರ್.ಡಿ.ಒ ಮಾಜಿ ಕುಲಪತಿಗಳಾದ ಪ್ರೊ.ಎಲ್.ಎಮ್. ಪಾಟ್ನಾಯಕ್, ವಿಶ್ವವಿದ್ಯಾಲಯ ಧನಸಹಾಯ ಆಯೋಗದ ಹಾಗೂ ರಾಷ್ಟ್ರೀಯ ಶಿಕ್ಷಣ ಕರಡು ನೀತಿಯ ಸದಸ್ಯರಾದ ಪ್ರೊ. ಎಂ. ಕೆ.ಶ್ರೀಧರ್, ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಡಾ. ಎಸ್. ಸಚ್ಚಿದಾನಂದ, ಚೆನ್ನೈನ ಅಣ್ಣಾ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಎಂ.ಕೆ.ಸೂರಪ್ಪ, ಬೆಂಗಳೂರು ವಿಶ್ವವಿದ್ಯಾಲಯದ ಮಾಜಿ ಕುಲಪತಿಗಳಾದ ಪ್ರೊ.ಕೆ.ಸಿದ್ದಪ್ಪ, ಪ್ರೊ. ಎಚ್.ಎ.ರಂಗನಾಥ್, ಪ್ರೊ. ಬಿ.ತಿಮ್ಮೇಗೌಡ, ಜೈನ್ ವಿಶ್ವವಿದ್ಯಾಲಯದ ಉಪಕುಲಪತಿಗಳಾದ ಪ್ರೊ. ಸಂದೀಪ ಶಾಸ್ತ್ರಿ, ಕರ್ನಾಟಕ ರಾಜ್ಯ ಇನ್ನೋವೇಟಿವ್ ಕೌನ್ಸಿಲ್ ಅಧ್ಯಕ್ಷರಾದ ಪ್ರೊ. ಎಚ್ಬಿ ಕಿಂಚ, ರಾಷ್ಟ್ರೀಯ ಕಾನೂನು ಶಾಲೆಯ ಮಾಜಿ ಕುಲಪತಿಗಳಾದ ಪ್ರೊ.ಕೆ.ಆರ್.ವೆಂಕಟರಾವ್, ಅಕಾಡೆಮಿ ಕ್ರಯೇಟಿವ್ ಟೀಚಿಂಗ್ ಸಂಸ್ಥಾಪಕರು ಹಾಗೂ ಅಧ್ಯಕ್ಷರಾದ ಪ್ರೊ.ಗುರುರಾಜ್ ಕರ್ಜಗಿ, ಬಯೋಕಾನ್ ನಿರ್ದೇಶಕರಾದ ಪ್ರತಿಮರಾವ್, ಜಿ.ಆರ್ ಶಿಕ್ಷಣ ಸಂಸ್ಥೆಯ ಸಂಸ್ಥಾಪಕರಾದ ಡಾ.ಗೀತಾ ರಾಮಾನುಜಂ, ಎಸ್ ಎಸ್ ಬಿ ಆರ್ ಸಂಸ್ಥೆಯ ನಿರ್ದೇಶಕರಾದ ಡಾ. ಮಾನಸ ನಾಗಭೂಷಣಮ್, ಅಜೀಮ್ ಪ್ರೇಂಜೀ ವಿಶ್ವವಿದ್ಯಾಲಯದ ಪ್ರೊ ರಿಷಿಕೇಶ್, ಇವರೆಲ್ಲ ಸಂಪನ್ಮೂಲ ವ್ಯಕ್ತಿಗಳು ಐದು ದಿನಗಳ ಕಾರ್ಯಗಾರದಲ್ಲಿ ಭಾಗವಹಿಸುತ್ತಿದ್ದಾರೆ.

ಈ ಐದು ದಿನಗಳ ಕಾರ್ಯಕ್ರಮಕ್ಕೆ ಈಗಾಗಲೇ ಹತ್ತು ಸಾವಿರ ಜನ ಪ್ರಾಧ್ಯಾಪಕರು, ಸಂಶೋಧನಾ ವಿದ್ಯಾರ್ಥಿಗಳು, ಪದವಿ ಹಾಗೂ ಸ್ನಾತಕೋತ್ತರ

ವಿದ್ಯಾರ್ಥಿಗಳು, ವಿವಿಧ ಇಲಾಖೆಗಳಲ್ಲಿ ಕೆಲಸ ಮಾಡುತ್ತಿರುವ ಅಧಿಕಾರಿಗಳು, ಹಾಗೂ ಪೋಷಕರು, ಸಾರ್ವಜನಿಕರೆಲ್ಲರೂ ದೇಶದ ವಿವಿಧ ಭಾಗಗಳಿಂದ ಭಾಗವಹಿಸುತ್ತಿದ್ದಾರೆ ಎಂದು ಬೆಂಗಳೂರು ವಿಶ್ವವಿದ್ಯಾಲಯದ ಕುಲಪತಿ ಕೆ.ಆರ್.ವೇಣುಗೋಪಾಲ್ ಅವರು ತಿಳಿಸಿದ್ದಾರೆ.

ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಇಚ್ಛಿಸುವವರು ಈ ಎಲ್ಲಾ ಐದು ದಿನಗಳಲ್ಲೂ ಜೂಮ್ ಐಡಿ 87105284169 ಹಾಗೂ ಪಾಸ್ವರ್ಡ್ BUB123 ಬಳಸಿ ಭಾಗವಹಿಸಬಹುದು. ಹೆಚ್ಚಿನ ವಿವರಗಳಿಗಾಗಿ ಡಾ. ವಾಹಿನಿ ಹಾಗೂ ಡಾ.ಎನ್. ಸತೀಶ್ ಗೌಡ ಇವರ 94822 18980/ 99160 07211 ದೂರವಾಣಿ ಸಂಖ್ಯೆಗಳಿಗೆ ಕರೆ ಮಾಡಿ ಕಾರ್ಯಕ್ರಮದಲ್ಲಿ ಭಾಗವಹಿಸಬಹುದಾಗಿದೆ.

******

## ಉತ್ತರ ಕರ್ನಾಟಕ ಭಾಗದಲ್ಲಿ ಮಳೆ ಹಾನಿ: ಮುಖ್ಯಮಂತ್ರಿಗಳಿಂದ ವೈಮಾನಿಕ ಸಮೀಕ್ಷೆ

ಬೆಂಗಳೂರು, ಆಗಸ್ಟ್ 23 (ಕರ್ನಾಟಕ ವಾರ್ತೆ)

ಆಗಸ್ಟ್ 25 ರಂದು ಮಾನ್ಯ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಮಳೆ ಹಾನಿಗೆ ಸಂಬಂಧಿಸಿದಂತೆ ಬೆಳಗಾವಿ, ಧಾರವಾಡ, ವಿಜಯಪುರ, ಬಾಗಲಕೋಟೆ ಹಾಗೂ ಗದಗ ಜಿಲ್ಲೆಗಳಲ್ಲಿ ವೈಮಾನಿಕ ಸಮೀಕ್ಷೆ ನಡೆಸುವ ಸಲುವಾಗಿ ಉತ್ತರ ಕರ್ನಾಟಕ ಭಾಗದಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಮುಖ್ಯಮಂತ್ರಿಯವರ ಸಚಿವಾಲಯ ಪ್ರಕಟಣೆ ತಿಳಿಸಿದೆ.

ಅಂದು ಬೆಳಿಗ್ಗೆ 9 ಗಂಟೆಗೆ ಹೆಚ್.ಎ.ಎಲ್ ವಿಮಾನ ನಿಲ್ದಾಣದ ಮೂಲಕ ಹೊರಡಲಿರುವ ಮುಖ್ಯಮಂತ್ರಿಗಳು ಬೆಳಗಾವಿ ಜಿಲ್ಲೆಯ ಸಾಂಬ್ರಾ ವಿಮಾನ ನಿಲ್ದಾಣಕ್ಕೆ ಬೆಳಿಗ್ಗೆ 10.15 ಕ್ಕೆ ತಲುಪಲಿದ್ದಾರೆ. ಅಲ್ಲಿಯೇ ಬೆಳಗಾವಿ ಮತ್ತು ಧಾರವಾಡ ಜಿಲ್ಲೆಗಳ ಸಚಿವರು, ಶಾಸಕರು, ಸಂಸತ್ ಸದಸ್ಯರು, ಜಿಲ್ಲಾಧಿಕಾರಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಮಳೆ ಹಾನಿಗೆ ಸಂಬಂಧಿಸಿದಂತೆ ಚರ್ಚೆ ನಡೆಸಿ ಸಾಂಬ್ರಾ ವಿಮಾನ

ನಿಲ್ದಾಣದಿಂದ ಹೆಲಿಕಾಪ್ಟರ್ ಮೂಲಕ ಮಳೆಯಿಂದ ಹಾನಿಗೊಳಗಾದ ಪ್ರದೇಶಗಳ ವೈಮಾನಿಕ ಸಮೀಕ್ಷೆ ನಡೆಸಲಿದ್ದಾರೆ.

ತದನಂತರ ಮಧ್ಯಾಹ್ನ 12.30 ಕ್ಕೆ ವಿಜಯಪುರ ಜಿಲ್ಲೆಯ ಆಲಮಟ್ಟಿ ಅಣೆಕಟ್ಟು ಆವರಣದ ಹೆಲಿಪ್ಯಾಡ್‌ಗೆ ಆಗಮಿಸುವ ಅವರು ಲಾಲ್ ಬಹದ್ದೂರ್ ಶಾಸ್ತ್ರಿ ಜಲಾಶಯಕ್ಕೆ ಭೇಟಿ ನೀಡಿ ವಿಜಯಪುರ, ಬಾಗಲಕೋಟೆ ಮತ್ತು ಗದಗ ಜಿಲ್ಲೆಗಳ ಸಚಿವರು, ಶಾಸಕರು, ಸಂಸತ್ ಸದಸ್ಯರು, ಜಿಲ್ಲಾಧಿಕಾರಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಮಳೆ ಹಾನಿಗೆ ಸಂಬಂಧಿಸಿದಂತೆ ಆಲಮಟ್ಟಿ ಅತಿಥಿ ಗೃಹದ ಸಭಾಂಗಣದಲ್ಲಿ ಸಭೆ ನಡೆಸಿ, 2.30ಕ್ಕೆ ವೈಮಾನಿಕ ಸಮೀಕ್ಷೆ ನಡೆಸುವರು.

ಅಂದೇ ಮಧ್ಯಾಹ್ನ 3.45 ಕ್ಕೆ ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣದಿಂದ ವಿಶೇಷ ವಿಮಾನದ ಮೂಲಕ ಬೆಂಗಳೂರಿನ ಹೆಚ್.ಎ.ಎಲ್ ವಿಮಾನ ನಿಲ್ದಾಣಕ್ಕೆ ಸಂಜೆ 5 ಗಂಟೆಗೆ ಹಿಂದಿರುಗಲಿದ್ದಾರೆ.

ಕೋವಿಡ್–19 ಸಾಂಕ್ರಾಮಿಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಸದರಿ ಪ್ರವಾಸ ಕಾರ್ಯಕ್ರಮದಲ್ಲಿ ಅತಿ ಕಡಿಮೆ ಸಂಖ್ಯೆಯಲ್ಲಿ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಭಾಗವಹಿಸುವ ಜೊತೆಗೆ ಕಡ್ಡಾಯವಾಗಿ ಮಾಸ್ಕ್‌ಗಳನ್ನು ಧರಿಸಿ ಸಾಮಾಜಿಕ ಅಂತರ ಕಾಯ್ದುಕೊಳ್ಳುವಂತೆ ಮುಖ್ಯಮಂತ್ರಿಗಳ ಸಚಿವಾಲಯದಿಂದ ಸೂಚಿಸಲಾಗಿದೆ.

******

## ಒತ್ತುವರಿ ತೆರವುಗೊಳಿಸುವ ಸಂಬಂಧ ಸಭೆ ನಿಗದಿಪಡಿಸಲು ಸೂಚನೆ

ಬೆಂಗಳೂರು, ಆಗಸ್ಟ್ 23 (ಕರ್ನಾಟಕ ವಾರ್ತೆ)

ಮಲಪ್ರಭಾ ನದಿ ತೀರದಲ್ಲಿ ನಡೆಯುತ್ತಿರುವ ಒತ್ತುವರಿ ತೆರವುಗೊಳಿಸುವ ಸಂಬಂಧ, ತುರ್ತು ಪರಿಹಾರವನ್ನು ಕಂಡುಕೊಳ್ಳುವ ಸಲುವಾಗಿ ಬೆಳಗಾವಿ, ಧಾರವಾಡ, ಗದಗ ಮತ್ತು ಬಾಗಲಕೋಟೆ ಜಿಲ್ಲೆಗಳ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಸಭೆಯನ್ನು ನಿಗದಿಪಡಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡುವಂತೆ ಮಾನ್ಯ ಉಪಮುಖ್ಯಮಂತ್ರಿ ಶ್ರೀ ಗೋವಿಂದ ಎಂ. ಕಾರಜೋಳ ಅವರು ಜಲಸಂಪನ್ಮೂಲ ಸಚಿವರಿಗೆ ತಿಳಿಸಿದ್ದಾರೆ.

ಉತ್ತರ ಕರ್ನಾಟಕದ ಮಲಪ್ರಭಾ ನದಿ ತೀರದಲ್ಲಿ ಮಾನವನ ಅತಿಯಾದ ದುರಾಸೆಯಿಂದ ಒತ್ತುವರಿ ಪರಿಣಾಮವಾಗಿ ಪ್ರವಾಹ ಉಂಟಾಗುತ್ತಿದೆ. ಇದರಿಂದಾಗಿ ಬೆಳಗಾವಿ, ಧಾರವಾಡ ಗದಗ ಮತ್ತು ಬಾಗಲಕೋಟೆ ನಾಲ್ಕು ಜಿಲ್ಲೆಗಳ ನದಿ ಪಾತ್ರದಲ್ಲಿ ಪ್ರವಾಹದಿಂದ ಅಪಾರ ಆಸ್ತಿಪಾಸ್ತಿಗೆ ಹಾನಿಯುಂಟಾಗುತ್ತಿದೆ. ಆದ್ದರಿಂದ ಮಲಪ್ರಭಾ ನದಿ ಪಾತ್ರದ ಒತ್ತುವರಿ ತೆರವುಗೊಳಿಸುವುದಕ್ಕೆ ಸರ್ಕಾರದಿಂದ ಕ್ರಮ ಕೈಗೊಳ್ಳುವ ಸಲುವಾಗಿ ಉಪಮುಖ್ಯಮಂತ್ರಿಗಳು ಸಭೆಯನ್ನು ನಡೆಸಿದ್ದರು.

ಈ ಸಭೆಯಲ್ಲಿ ಮಲಪ್ರಭಾ ನದಿಯ ಉಳಿವಿಗೆ ಮತ್ತು ಒತ್ತುವರಿ ತೆರವುಗೊಳಿಸಿ, ಪ್ರವಾಹವನ್ನು ನಿಯಂತ್ರಿಸುವ ಸಲುವಾಗಿ ಶಾಶ್ವತ ಪರಿಹಾರವನ್ನು ಕಂಡುಕೊಳ್ಳುವುದು ಸೂಕ್ತವೆಂದು ತೀರ್ಮಾನಿಸಲಾಯಿತು.

ಆದುದರಿಂದ ನದಿ ತೀರದ ಒತ್ತುವರಿ ತೆರವಿಗೆ ತುರ್ತು ಪರಿಹಾರವನ್ನು ಕಂಡುಕೊಳ್ಳುವ ಸಲುವಾಗಿ ಬೆಳಗಾವಿ, ಧಾರವಾಡ, ಗದಗ ಮತ್ತು ಬಾಗಲಕೋಟೆ ಜಿಲ್ಲೆಗಳ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಸಭೆಯನ್ನು ಕೂಡಲೇ ನಿಗದಿಪಡಿಸುವಂತೆ ಅವರು ತಿಳಿಸಿದ್ದಾರೆ.

*****